ಬಿಸಿ ಊಟದ ವ್ಯವಸ್ಥೆಗೆ ಶಿಕ್ಷಕರ ಬಳಕೆ

463 (865) ಶ್ರೀ ರಾಜು ಕೆ. (ರಾಮನಗರ)– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಬಿಸಿ ಊಟದ ವ್ಯವಸ್ಥೆಗೆ ಉಪಾಧ್ಯಾಯರುಗಳನ್ನು ಬಳಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಇದರಿಂದ ವಿದ್ಯಾರ್ಥಿಗಳ ಪಾಠ ಪ್ರವಚನಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಈ ತೊಂದರೆಯನ್ನು ನಿವಾರಿಸಲು ಪರ್ಯಾಯ ವ್ಯವಸ್ಥೆಯನ್ನು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಈ) ಹಾಗಿದ್ದಲ್ಲಿ, ಯಾವ ರೀತಿಯ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಲಾಗುವುದು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಪಶು ಸಂಗೋಪನಾ ಕೇಂದ್ರ ಮಂಜೂರಾತಿ

466 (869) ಶ್ರೀ ರಾಮಚಂದ್ರ ಎಸ್.ವಿ. (ಜಗಳೂರು):– ಮಾನ್ಯ ಪಶುಸಂಗೋಪನಾ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ದಾವಣಗೆರೆ ಜಿಲ್ಲೆ ಜಗಳೂರು ಮತಕ್ಷೇತ್ರದಲ್ಲಿರುವ ಪಶು ಸಂಗೋಪನಾ ಕೇಂದ್ರಗಳೆಷ್ಟು ; ಪಶುಸಂಗೋಪನಾ ಕೇಂದ್ರಗಳಲ್ಲಿರುವ ಸಿಬ್ಬಂದಿ ವರ್ಗಗಳೆಷ್ಟು; (ವರ್ಗವಾರು ವಿವರ ನೀಡುವುದು) ;

ಆ) ದಾವಣಗೆರೆ ಜಿಲ್ಲೆ ಜಗಳೂರು ಮತ ಕ್ಷೇತ್ರದಲ್ಲಿ 2008–09, 2009–10 ರಲ್ಲಿ ಸರ್ಕಾರದಿಂದ ಹೊಸದಾಗಿ ಎಷ್ಟು ಪಶು ಸಂಗೋಪನಾ ಕೇಂದ್ರಗಳು ಮಂಜೂರಾಗಿರುತ್ತವೆ ; ಹಾಗಿದ್ದಲ್ಲಿ ಯಾವ್ಯಾವ ಗ್ರಾಮ ಪಂಚಾಯಿತಿಗಳಿಗೆ ಮಂಜೂರು ಮಾಡಲಾಗಿದೆ ; (ವಿವರ ನೀಡುವುದು) ;

ಇ) 2010–11ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ಪಶುಸಂಗೋಪನಾ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ?